(19)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ ಇಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/06/ಅಭಿವೃದ್ಧಿ(3)/2016-17, ದಿನಾಂಕ:05.09.2017.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ACA/AFF/AY-72/2017-18, ದಿನಾಂಕ:28/03/2016.
3. ಸರ್ಕಾರದ ಪತ್ರ ಸಂಖ್ಯೆ:ಆಕುಕ 97 ಪಿಟಿಡಿ 2016, ದಿನಾಂಕ:25.04.2017.
4. ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:R.12011/62/2016-EP (IM-1), dated: 31/08/2017.

***

### ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಿದ್ದರ ಮೇರೆಗೆ ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಒದಗಿಸಲಾಗಿದ್ದು, ಪ್ರಸ್ತುತ ಕೇಂದ್ರ ಸರ್ಕಾರವು ಸದರಿ ಕೋರ್ಸ್ ಪ್ರಾರಂಭಿಸಲು ಕೆಲವು ಷರತ್ತಿಗೊಳಪಟ್ಟು ಅನುಮತಿ ನೀಡಿರುತ್ತದೆ. ಅದರಂತೆ 2017-18ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಸಂ (2)ರ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಸರ್ಕಾರದ ಪತ್ರದೊಂದಿಗೆ, ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ (4)ರ ಪತ್ರದಲ್ಲಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.

. . . 2

2) ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-09.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ಪ್ರಾಂಶುಪಾಲರು, ಶ್ರೀ ಬೀರೇಶ್ವರ ಶಿಕ್ಷಣ ಸಂಸ್ಥೆಯ ಕೃಷ್ಣ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸಂಕೇಶ್ವರ, ಬೆಳಗಾವಿ ಜಿಲ್ಲೆ

<u>ಪ್ರತಿಗಳು:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.